ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಪಡಿತರ ವಿತರಣೆ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

651 (756) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳಿಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಆಹಾರ ಧಾನ್ಯಗಳನ್ನು ವಿತರಿಸುವ ಸಮಯದಲ್ಲಿ ಫಲಾನುಭವಿಗಳ ಹೆಬ್ಬೆಟ್ಟಿನ ಗುರುತು ನೀಡುವಾಗ ಗ್ರಾಮೀಣ ಪ್ರದೇಶಗಳಲ್ಲಿ ಸರ್ವರ್ ಮಂದಗತಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಆಹಾರ ಧಾನ್ಯಗಳ ವಿತರಣೆಯಲ್ಲಿ ವಿಳಂಬವಾಗಿ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದರ ಜೊತೆಗೆ ಒಬ್ಬ ಫಲಾನುಭವಿಯಿಂದ ರೂ.15/- ರೂಗಳನ್ನು ಸಂಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಇತ್ತೀಚಿನ ಸರ್ಕಾರದ ಆದೇಶದನ್ವಯ ಪಡಿತರ ಚೀಟಿ ಹೊಂದಿದ ಪ್ರತಿಯೊಬ್ಬ ಫಲಾನುಭವಿಗಳ ಇ.ಕೆ.ವೈ.ಸಿ ಫಾರಂನ್ನು ಭರ್ತಿ ಮಾಡಿ ನೀಡಬೇಕಾಗಿದ್ದು, ಹಲವಾರು ಫಲಾನುಭವಿಗಳಿಂದ ಈ ಫಾರಂನ್ನು ಭರ್ತಿ ಮಾಡಿ ನೀಡುವಲ್ಲಿ ವಿಳಂಬವಾಗುತ್ತಿರುವುದು ಹಾಗೂ ಆಹಾರ ಧಾನ್ಯಗಳ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳು ಉದ್ಯೋಗ ಅರಸಿ ತಾತ್ಕಾಲಿಕವಾಗಿ ಬೇರೆ ಪ್ರದೇಶ/ನಗರಗಳಿಗೆ ಹೋಗಿರುವುದರಿಂದ ಇ.ಕೆ.ವೈಸಿ ಫಾರಂನ್ನು ಭರ್ತಿ ಮಾಡಿ ನೀಡುವಲ್ಲಿ ವಿಳಂಬವಾಗುತ್ತಿದ್ದು, ಅಂತಹ ಫಲಾನುಭವಿಗಳು ಅವರು ತಾತ್ಕಾಲಿಕವಾಗಿ ನೆಲಸಿರುವ ಗ್ರಾಮ/ಪಟ್ಟಣಗಳಲ್ಲಿ ಇ.ಕೆ.ವೈ.ಸಿ ಫಾರಂನ್ನು ಭರ್ತಿ ಮಾಡಿ ಆನ್‌ಲೈನ್ ಮುಖೇನ ಸಲ್ಲಿಸಲು ಅನುವು ಮಾಡಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ಸಂಪೂರ್ಣ ವಿವರ ನೀಡುವುದು)